**II ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4x1=4**

7. ವಿದ್ಯೆ : ಬಿಜ್ಜೆ : : ಪ್ರಸಾದ : ________
8. ನಡೆ ನಡೆ : ದ್ವಿರುಕ್ತಿ : : ಸತಿಪತಿ : ________
9. ಅಂಗೈ : ಅಂಶಿ ಸಮಾಸ : : ಮೈಮುಚ್ಚು : ________
10. ಅರ್ತಿ : ಪ್ರೀತಿ : : ಅಬ್ಬೆ : ________

**III ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7x1=7**

11. ರಾಹಿಲನು ಯಾರು?
12. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?
13. ಲಂಡನ್ನಿನ ಪೇಟೆಯಲ್ಲಿರುವ ಸ್ಟೇಷನರಿ ಅಂಗಡಿಯ ಹೆಸರೇನು?
14. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?
15. ಹಲಗಲಿ ಗ್ರಾಮ ಗುರುತು ಉಳಿಯದಂತಾದುದು ಏಕೆ?
16. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು?
17. ವಿವೇಕಾನಂದರನ್ನು 'ಮಾನವತಾಮಿತ್ರ'ರೆಂದು ಕರೆದವರಾರು?

**IV ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **10x2=20**

18. 'ವೂಲವರ್ಥ' ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು?
19. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯನವರ ಅಭಿಪ್ರಾಯವೇನು?
20. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೇನು? ವಿವರಿಸಿ.
21. ವಚನಕಾರರಿಗೆ ಯಾವುದು ದೇವರಾಗಿತ್ತು? ವಿವರಿಸಿ.
22. ಹೊಸಗಾಲದ ಹಸುಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ?
23. ಹಸುರು ಸಕಲೇಂದ್ರಿಯಗಳನ್ನು ವ್ಯಾಪಿಸಿದೆ ಎಂಬುದನ್ನು ಕವಿ ಹೇಗೆ ವರ್ಣಿಸಿದ್ದಾರೆ?
24. ವಿವೇಕಾನಂದರು ಕೋಮುವಾದದ ಕಟ್ಟಾ ವಿರೋಧಿಯಾಗಿದ್ದರು. ಏಕೆ?
25. ವಸಂತನು ಯಾರು ಯಾರಿಗೆ ಮುಖ ತೋರಲಿಲ್ಲ?
26. ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು ಯಾವುದರ ಪ್ರತೀಕ ಎಂದು ತೋರಿಸುತ್ತಾನೆ?
27. ಹೊಲದಲ್ಲಿ ಹುಟ್ಟಿದ ಉತ್ತರಾಣಿ ಗಿಡ ಹಾಗೂ ಗರಿಕೆ ಹುಲ್ಲು ಕೊಡುವ ತೊಂದರೆಯನ್ನು ಜನಪದರು ಒಗಟಿನಲ್ಲಿ ಹೇಗೆ ವಿವರಿಸಿದ್ದಾರೆ?

